**ದಿನಾಂಕ :25–08–2021 ರಂದು ಸೋಮವಾರ ಮಧ್ಯಾಹ್ನ 11:00 ಗಂಟೆಗೆ ಅನ್ನಸಂಧ್ರ ಪಾಳ್ಯದ, ಬಿ.ಬಿ.ಎಂ.ಪಿ ಯೋಗ ಸೆಂಟರ್‌ನಲ್ಲಿ ವಾರ್ಡ್ ಸಂಖ್ಯೆ:87ರ, ಶ್ರೀ.ವಿಜಯ ಕುಮಾರ್ ಸಹಾಯಕ ಕಾರ್ಯಪಾಲಕ ಅಭಿಯಂತರರು (Nodel Officer) ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು.**

**ಹಾಜರಿದ್ದ ಅಧಿಕಾರಿಗಳು :**

| | |
|---|---|
| 1. | ಶ್ರೀ. ಜಿ.ಡಿ.ಸೋಮಯ್ಯ (ಸಹಾಯಕ ಅಭಿಯಂತರರು) |
| 2. | ಶ್ರೀ. ರಂಗನಾಥ, (ಕಿರಿಯ ಆರೋಗ್ಯ ಪರಿವೀಕ್ಷಕರು) |
| 3. | ಶ್ರೀಮತಿ. ಮೀನಾ ಕುಮಾರಿ (ಪಿ.ಎಸ್.ಐ ಹೆಚ್.ಎ.ಎಲ್ ) |
| 4 | ಶ್ರೀ. ಎಲ್.ಸುರೇಶ್ ( ಕಿರಿಯ /ಸಹಾಯಕ ಅಭಿಯಂತರರು) ವಾರ್ಡ್ ನಂ–81 |
| 5 | ಶ್ರೀ. ಮಹಮದ್ ಮುದಾಸ್ಸಿರ್ (ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರು) |
| 6 | ಶ್ರೀ. ಯೋಗರಾಜ್ ( ಬೆಸ್ಕಾಂ ಸಹಾಯಕ ಅಭಿಯಂತರರು) |
| 7 | ಶ್ರೀ. ರಘುನಾಥ್.ಕೆ ( ಆರೋಗ್ಯ ಪರಿವೀಕ್ಷಕರು ) |
| 8 | ಶ್ರೀ. ಎನ್.ಕೃಷ್ಣ ಮೂರ್ತಿ (ಸಹಾಯಕ ಕಂದಾಯ ಅಧಿಕಾರಿ) |
| 9 | ಶ್ರೀ. ಜಯ ಪ್ರಕಾಶ್ ( ಕಂದಾಯ ನಿರೀಕ್ಷಕರು) |
| 10 | ಶ್ರೀ. ನರಸಿಂಹಮೂರ್ತಿ |
| 11 | ಶ್ರೀ. ಎಲ್.ಎನ್ ಹೆಗ್ಗಡೆ |
| 12 | ಶ್ರೀ. ಕೆ.ಆರ್.ಸಿ ವಾರಿಯರ್ಸ್ |
| 13 | ಶ್ರೀ. ಬಿ.ಸಿ.ಮುರುಗ |
| 14 | ಶ್ರೀ. ಎಂ. ಮಂಜುನಾಥ್ |
| 15 | ಶ್ರೀ. ಲಕ್ಷ್ಮಣ್ |
| 16 | ಶ್ರೀ. ಮಾಧು ರಾಜ್ |
| 17 | ನಿವಾಸಿ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸಾರ್ವಜನಿಕರು |

ಮಾನ್ಯ ಅಧ್ಯಕ್ಷರು ಹಾಜರಿದ್ದ ಅಧಿಕಾರಿಗಳು, ವಾರ್ಡ್ ಸಮಿತಿ ಸದಸ್ಯರು ಹಾಗೂ ರೆಸಿಡೆಂಟ್ಸ್ ವೆಲ್ಫೇರ್ ಅಸೋಸಿಯೆಷನ್‌ನ ಅಧ್ಯಕ್ಷರುಗಳು, ಪ್ರತಿನಿಧಿಗಳು ಹಾಗೂ ಸಾರ್ವಜನಿಕರನ್ನು ಸಭೆಗೆ ಸ್ವಾಗತಿಸುತ್ತಾ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

ಹಿಂದೆ ನಡೆದ ಸಭೆಯ ನಡವಳಿಗಳನ್ನು ಓದಿ ರೆಕಾರ್ಡ್ ಮಾಡಲಾಯಿತು.

1. **ಕೋವಿಡ್-19 ಸಾಂಕ್ರಮಿಕ ರೋಗಕ್ಕೆ ಸಂಬಂಧಿಸಿದಂತೆ, ಸಂಬಾವ್ಯ ಮೂರನೇ ಅಲೆಯನ್ನು ನಿಯಂತ್ರಿಸುವ ಬಗ್ಗೆ ಮತ್ತು ಸೊಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಕ್ರಮಗಳ ಬಗ್ಗೆ.**

ಈ ಕುರಿತು ಚರ್ಚಿಸಲಾಗಿ, ವಾರ್ಡ್‌ಗೆ ಸಂಬಂಧಿಸಿದ ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯ ಅಧಿಕಾರಿಗಳು ವಾರ್ಡ್‌ನಲ್ಲಿ ಕೋವಿಡ್-19 ಸಂಬಾವ್ಯ ಮೂರನೇ ಅಲೆಗೆ ಸಂಬಂಧಪಟ್ಟ ಸೋಂಕು ಹರಡುವುದನ್ನು ತಡೆಗಟ್ಟುವ ಎಲ್ಲಾ ಮುಂಜಾಗ್ರತ ಕ್ರಮಗಳನ್ನು ತೆಗೆದುಕೊಳ್ಳುತ್ತಿರುವುದಾಗಿ ತಿಳಿಸಿರುತ್ತಾರೆ, ಆರೋಗ್ಯ ಅಧಿಕಾರಿಗಳು ಕೋವಿಡ್ ಲಸಿಕೆಯನ್ನು ವಾರ್ಡ್‌ನ ಜನಸಾಮಾನ್ಯರಿಗೆ ನೀಡುತ್ತಿರುತ್ತಾರೆ. ಮುಂಬರುವ ದಿನಗಳಲ್ಲಿ ಲಸಿಕೆ ಪ್ರಮಾಣವನ್ನು ಹೆಚ್ಚಿಸಲಾಗುವುದೆಂದು ಆರೋಗ್ಯ ಅಧಿಕಾರಿಗಳು ತಿಳಿಸಿದರು.

2. **ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿಗಳಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ**

ವಾರ್ಡ್ ವ್ಯಾಪ್ತಿಯ ರಮೇಶ್‌ನಗರ, ಜಗಧೀಶ್‌ನಗರ ಹಾಗೂ ರೆಡ್ಡಿಪಾಳ್ಯದಲ್ಲಿ ಕುಡಿಯುವ ನೀರಿನ ಸಮಸ್ಯೆ ಹಾಗೂ ಒಳಚರಂಡಿಯ ಸಮಸ್ಯೆ ಇದ್ದು ಸಮಸ್ಯೆಗಳನ್ನು ಬಗೆಹರಿಸುವಂತೆ ಸಾರ್ವಜನಿಕರು ಕೋರಿರುತ್ತಾರೆ, ಸಮಸ್ಯೆಗಳನ್ನು ಬಗೆಹರಿಸುವಂತೆ ಸಂಬಂಧಪಟ್ಟ ಬಿ.ಡಬ್ಲ್ಯು.ಎಸ್.ಎಸ್.ಬಿ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

3. **ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ದಿ ಕಾರ್ಯಗಳ ಬಗ್ಗೆ :-**

ವಾರ್ಡ್‌ನ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಚರ್ಚಿಸಲಾಗಿದ್ದು ಜಗಧೀಶ್ ನಗರ , ಇಸ್ಲಾಂಪುರ ಹಾಗೂ ವಿನಾಯಕ ನಗರದಲ್ಲಿ ಚರಂಡಿಯ ಹೊಳೆತ್ತಲು ಸಾರ್ವಜನಿಕರು ಕೋರಿರುತ್ತಾರೆ. ಸದರಿ ಕಾಮಗಾರಿಯನ್ನು ಕೈಗೊಳ್ಳುವಂತೆ ಸಭೆಯಲ್ಲಿ ಸಂಬಂಧಪಟ್ಟ ವಾರ್ಡ್ ಅಭಿಯಂತರರಿಗೆ ಸೂಚಿಸಲಾಯಿತು.

4. **ಬೀದಿ ದೀಪಗಳ ನಿರ್ವಹಣೆ ಬಗ್ಗೆ:-**

ವಾರ್ಡ್ ವ್ಯಾಪ್ತಿಯಲ್ಲಿ ಬರುವ ಬೀದಿ ದೀಪಗಳ ಸಮರ್ಪಕವಾಗಿ ನಿರ್ವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.

5. **ವಿದ್ಯುತ್ ಸರಬರಾಹು (ಬೆಸ್ಕಾಂ)ಗೆ ಸಂಬಂದಿಸಿದ ವಿಷಯದ ಬಗ್ಗೆ:-**

ಈ ಕುರಿತು ಶ್ರೀ. ಎಂ.ಎಸ್. ಮಂಜುನಾಥ್ ರವರು ಮಾತನಾಡಿ ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್ ವ್ಯಾಪ್ತಿಯ 3ನೇ ಮುಖ್ಯರಸ್ತೆ ಜಗಧೀಶ್ ನಗರದಲ್ಲಿ .ವಿದ್ಯುತ್ ಕಂಬ ಹಾಳಾಗಿದ್ದು ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು,ವಿದ್ಯುತ್ ಕಂಬವನ್ನು ತೆಗೆದು ಹೊಸ ಕಂಬವನ್ನು ಅಳವಡಿಸಲು ಕೋರಿರುತ್ತಾರೆ. ಇದರ ಬಗ್ಗೆ ಕ್ರಮತೆಗೆದುಕೊಳ್ಳಲು ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಲಾಯಿತು.

6. **ಬೀದಿ ದೀಪದ ಕಂಬಗಳಲ್ಲಿ ಫ್ಯೂಜ್‌ಗಳು ದುರಸ್ಥಿಯಾಗಿರುವ ಬಗ್ಗೆ :-**

ವಾರ್ಡ್ ವ್ಯಾಪ್ತಿಯ ರಮೇಶ್‌ನಗರ ವಿನಾಯಕ ನಗರ ಹಾಗೂ ಇಸ್ಲಾಂಮ್‌ಪುರದಲ್ಲಿ ಫುಟ್‌ಬಾತ್ ಮೇಲಿನ ಬೀದಿ ದೀಪದ ಕಂಬಗಳಲ್ಲಿ ಫ್ಯೂಜ್‌ಗಳು ದುರಸ್ಥಿಯಾಗಿದ್ದು ಇವುಗಳನ್ನು ಸರಿಪಡಿಸಬೇಕೆಂದು ಸಾರ್ವಜನಿಕರು ಕೋರಿರುತ್ತಾರೆ. ಇದರ ಬಗ್ಗೆ ಕ್ರಮತೆಗೆದುಕೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.

ದಿನಾಂಕ :18-

ಬಿ.ಬಿ.ಎ 7. **ಚರಂಡಿ ಹೂಳು ಎತ್ತುವ ವಿಷಯದ ಬಗ್ಗೆ:-**

ವಾರ್ಡ್ ವ್ಯಾಪ್ತಿಯಲ್ಲಿ ಬರುವ ಅನ್ನಸಂದ್ರ ಪಾಳ್ಯ, ಜಗದೀಶ್‌ನಗರ ,ವಿನಾಯಕನಗರ ಹಾಗೂ ಇಸ್ಲಾಂಮ್‌ಪುರದಲ್ಲಿ ಬರುವ ಚರಂಡಿಗಳ ಹೂಳು ಎತ್ತುವುದು ಹಾಗೂ ಹಾಲಾಗಿರುವ ಚರಂಡಿಗಳ ಹೊಸದಾಗಿ ನಿರ್ಮಿಸುವ ಬಗ್ಗೆ ಸಾರ್ವಜನಿಕರು ಕೋರಿರುತ್ತಾರೆ. ಇದರ ಬಗ್ಗೆ ಕ್ರಮತೆಗೆದುಕೊಳ್ಳಲು ವಾರ್ಡ್ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

8. **ಹಾಳಾಗಿರುವ ಬೀದಿ ದೀಪಗಳ ನಿರ್ವಹಣೆಯ ಬಗ್ಗೆ:-**

ವಾರ್ಡ್ ವ್ಯಾಪ್ತಿಯಲ್ಲಿ ಬರುವ ಎಲ್ಲಮ್ಮ ದೇವಸ್ಥಾನದ ರಸ್ತೆ, ಇಸ್ಲಾಂಮ್‌ಪುರ ಹಾಗೂ ಕೈರಳಿ ಸ್ಕೂಲ್ ರಸ್ತೆಯಲ್ಲ ಬೀದಿ ದೀಪಗಳು ಹಾಳಾಗಿದ್ದು ರಾತ್ರಿ ವೇಳೆ ಸಾರ್ವಜನಿಕರಿಗೆ ಒಡಡಲು ತೊಂದರೆಯಾಗುತ್ತಿದ್ದು ಸೂಕ್ತ ಕ್ರಮ ತೆಗೆದುಕೊಳುವಂತೆ ಸಾರ್ವಜನಿಕರು ಕೋರಿರುತ್ತಾರೆ. ಇದರ ಬಗ್ಗೆ ಕ್ರಮತೆಗೆದುಕೊಳ್ಳಲು ಸಹಾಯಕ ಅಭಿಯಂತರರು ಸೂಚಿಸಲಾಯಿತು.

9. **ವಾಹನ ಸಂಚಾರ ಹಾಗೂ ವಾಹನ ನಿಲುಗಡೆಯ ಬಗ್ಗೆ:-**

ವಾರ್ಡ್ ವ್ಯಾಪ್ತಿಯಲ್ಲಿ ಬರುವ ರೆಡ್ಡಿಪಾಳ್ಯದ ಮುಖ್ಯರಸ್ತೆಯಲ್ಲಿ ದೀರ್ಘಕಾಲ ವಾಹನಗಳನ್ನು ನಿಲುಗಡೆ ಮಾಡುವುದರಿಂದ ಸಾರ್ವಜನಿಕರಿ ತೊಂದರೆಯಾಗುತ್ತಿದ್ದು ಹಾಗೂ ಅನ್ನಸಂದ್ರಪಾಳ್ಯ ಮುಖ್ಯರಸ್ತೆ ಹಾಗೂ ಜಗದೀಶ್‌ನಗರ 1ನೇ ಮುಖ್ಯರಸ್ತೆಯಲ್ಲಿ ಪಾದಚಾರಿ ರಸ್ತೆಯ ಮೇಲೆ ಅಂಗಡಿಮುಗಟ್ಟುಗಳನ್ನು ಇಡುವ ಕಾರಣ ಸಾರ್ವಜನಿಕರ ಒಡಟಕ್ಕೆ ಹಾಗೂ ವಾಹನ ಸಂಚಾರಕ್ಕೆ ತುಂಬಾ ತೊಂದರೆಯಾಗುತ್ತುದ್ದು ಇದಕ್ಕೆ ಸೂಕ್ತ ಕ್ರಮ ತೆಗೆದುಕೊಳುವಂತೆ ಸಾರ್ವಜನಿಕರು ಕೋರಿರುತ್ತಾರೆ. ಇದರ ಬಗ್ಗೆ ಕ್ರಮತೆಗೆದುಕೊಳ್ಳಲು ವಾರ್ಡ್ ಸಹಾಯಕ ಅಭಿಯಂತರರು, ಸಂಚಾರಿ ಪೊಲೀಸ್ ಅಧಿಕಾರಿಗಳಿಗೆ ಹಾಗೂ ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿಲಾಯಿತು.

ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು
ವಾರ್ಡ್ ನಂ.87 ಹೆಚ್.ಎ.ಎಲ್ ಏರ್‌ಪೋರ್ಟ್

ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ
ನೋಡೆಲ್ ಅಧಿಕಾರಿಗಳು

**ಪ್ರತಿಯನ್ನು:**

1. ಮಾನ್ಯ ಜಂಟಿ ಆಯುಕ್ತರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
2. ಮುಖ್ಯ ಅಭಿಯಂತರರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
3. ಕಛೇರಿ ಪ್ರತಿ.